**National**
**Kannada**
**04.06.2025 7.35 p.m.**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

1. ಪ್ರಧಾನಿ ನರೇಂದ್ರ ಮೋದಿ, ಆಸ್ಟ್ರೇಲಿಯಾ ಉಪಪ್ರಧಾನಿ ನಡುವೆ ದ್ವಿಪಕ್ಷೀಯ ಸಭೆ : ಸಮಗ್ರ ಕಾರ್ಯತಂತ್ರದ ಪಾಲುದಾರಿಕೆ ಬಲಪಡಿಸಲು ಒತ್ತು
2. ಕೇಂದ್ರ ಸರ್ಕಾರದಿಂದ ಸಂಸತ್ತಿನ ಮುಂಗಾರು ಅಧಿವೇಶನದ ವೇಳಾಪಟ್ಟಿ ಪ್ರಕಟ : ಜುಲೈ ೨೧ರಿಂದ ಆಗಸ್ಟ್ ೧೨ರವರೆಗೆ ನಡೆಸಲು ನಿರ್ಧಾರ
3. ದುರಂತಕ್ಕೆ ತಿರುಗಿದ ಆರ್‌ಸಿಬಿ ಸಂಭ್ರಮಾಚರಣೆ : ಕಾಲ್ತುಳಿತದಲ್ಲಿ ಮೃತಪಟ್ಟವರ ಸಂಖ್ಯೆ ೧೦ಕ್ಕೆ ಏರಿಕೆ
4. ೨೦೨೭ ರಲ್ಲಿ ಎರಡು ಹಂತಗಳಲ್ಲಿ ಜನಗಣತಿ ನಡೆಸಲು ಕೇಂದ್ರ ಸರ್ಕಾರ ತೀರ್ಮಾನ
5. ವಿಶ್ವ ಪರಿಸರ ದಿನಾಚರಣೆ: ನವದೆಹಲಿಯಲ್ಲಿ ನಾಳೆ ಪ್ರಧಾನಿ ನೇತೃತ್ವದಲ್ಲಿ ವಿಶೇಷ ಸಸಿ ನೆಡುವ ಅಭಿಯಾನ

<><><><>

ಭಾರತ-ಆಸ್ಟ್ರೇಲಿಯಾ ನಡುವಿನ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಪ್ರಧಾನಿ ನರೇಂದ್ರ ಮೋದಿ ಹಾಗೂ ಆಸ್ಟ್ರೇಲಿಯಾ ಉಪಪ್ರಧಾನಿ ಹಾಗೂ ರಕ್ಷಣಾ ಸಚಿವ ರಿಚರ್ಡ್ ಮಾರ್ಲೆಸ್, ನವದೆಹಲಿಯಲ್ಲಿಂದು ಮಾತುಕತೆ ನಡೆಸಿದರು. ಈ ವೇಳೆ ಆಸ್ಟ್ರೇಲಿಯಾ ಉಪಪ್ರಧಾನಿ ಗಡಿಯಾಚೆಗಿನ ಭಯೋತ್ಪಾದನೆಯ ವಿರುದ್ಧದ ಭಾರತದ ಹೋರಾಟಕ್ಕೆ ಆಸ್ಟ್ರೇಲಿಯಾದ ಬೆಂಬಲವಿರುವುದಾಗಿ ಭರವಸೆ ನೀಡಿದರು

ಸಭೆಯಲ್ಲಿ ಉಭಯ ರಾಷ್ಟ್ರಗಳ ನಡುವಿನ ರಕ್ಷಣಾ ಕೈಗಾರಿಕಾ ಸಹಭಾಗಿತ್ವ, ಸದೃಢ ಪೂರೈಕೆ ಸರಪಳಿ, ನಿರ್ಣಾಯಕ ಖನಿಜಗಳು, ಹಾಗೂ ನವ ಮತ್ತು ಉದಯೋನ್ಮುಖ ತಂತ್ರಜ್ಞಾನದ ಕ್ಷೇತ್ರಗಳಲ್ಲಿ ಸಹಕಾರ ಸಂಬಂಧವನ್ನು ಮತ್ತಷ್ಟು ಬಲಪಡಿಸುವ ಅಗತ್ಯತೆ ಕುರಿತು ಒತ್ತಿ ಹೇಳಲಾಯಿತು.

<><><><>

ಸಂಸತ್ತಿನ ಮುಂಗಾರು ಅಧಿವೇಶನದ ವೇಳಾಪಟ್ಟಿಯನ್ನು ಕೇಂದ್ರ ಸರ್ಕಾರ ಇಂದು ಪ್ರಕಟಿಸಿದೆ. ನವದೆಹಲಿಯಲ್ಲಿಂದು ಈ ಕುರಿತು ಸುದ್ದಿಗಾರರಿಗೆ ಮಾಹಿತಿ ನೀಡಿದ ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ಮುಂದಿನ ತಿಂಗಳ ೨೧ರಂದು ಸಂಸತ್ತಿನ ಮುಂಗಾರು ಅಧಿವೇಶನ ಆರಂಭವಾಗಲಿದ್ದು, ಆಗಸ್ಟ್ ೧೨ರಂದು ಕೊನೆಗೊಳ್ಳಲಿದೆ. ಈ ಕುರಿತಂತೆ ಕೇಂದ್ರ

ಸರ್ಕಾರ ನಿರ್ಧಾರ ತೆಗೆದುಕೊಂಡಿದ್ದು, ರಾಷ್ಟ್ರಪತಿಯವರಿಗೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದು ತಿಳಿಸಿದ್ದಾರೆ.

ಧ್ವನಿ : ಸಚಿವ ಕಿರಣ್ ರಿಜಿಜು

೨೫ ಭಾರತೀಯರು ಹಾಗೂ ಓರ್ವ ನೇಪಾಳಿ ಪ್ರಜೆಯ ಸಾವಿಗೆ ಕಾರಣವಾದ ಪಹಲ್ಗಾಮ್ ಭಯೋತ್ಪಾದಕ ದಾಳಿಯ ಬಳಿಕ ಭಾರತ ಪ್ರತೀಕಾರವಾಗಿ ನಡೆಸಿದ ಆಪರೇಷನ್ ಸಿಂದೂರ್ ನಂತರ ನಡೆಯುತ್ತಿರುವ ಮೊದಲ ಸಂಸತ್ತಿನ ಅಧಿವೇಶನ ಇದಾಗಲಿದೆ. ಪ್ರತಿ ದಾಳಿಯಾಗಿ ಭಾರತೀಯ ಸೇನೆ ಪಾಕಿಸ್ತಾನ ಮತ್ತು ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿರುವ ಭಯೋತ್ಪಾದಕ ತಾಣಗಳನ್ನು ನಾಶಪಡಿಸಿ ನೂರಕ್ಕೂ ಅಧಿಕ ಭಯೋತ್ಪಾದಕರನ್ನು ಹತ್ಯೆಗೈದಿದ್ದು, ಇದರ ಬಳಿಕ ಸರ್ಕಾರ ಎರಡು ಸರ್ವಪಕ್ಷಗಳ ಸಭೆಗಳನ್ನು ನಡೆಸಿತ್ತು. ಆಪರೇಷನ್ ಸಿಂದೂರ್ ಸೇರಿದಂತೆ ಭಯೋತ್ಪಾದನೆ ವಿರುದ್ಧದ ಕ್ರಮಗಳ ಕುರಿತು ಚರ್ಚಿಸಲು ಸಂಸತ್ ಅಧಿವೇಶನ ಕರೆಯುವಂತೆ ವಿರೋಧ ಪಕ್ಷಗಳು ವಿರೋಧ ಆಗ್ರಹಿಸಿದ ಬೆನ್ನಲ್ಲೇ ಕೇಂದ್ರ ಸರ್ಕಾರ ಮುಂದಿನ ತಿಂಗಳ ೨೧ ರಿಂದ ಸಂಸದೀಯ ಅಧಿವೇಶನ ನಡೆಸಲು ನಿರ್ಧರಿಸಿದೆ.

<><><>

ಮೊದಲನೇ ಬಾರಿ ಐಪಿಎಲ್ ಪ್ರಶಸ್ತಿ ಗೆದ್ದ ರಾಯಲ್ ಚಾಲೆಂಜರ್ಸ್ ಬೆಂಗಳೂರು ವಿಜಯೋತ್ಸವ ಮುಗಿಲು ಮುಟ್ಟುತ್ತಲೇ ದುರಂತ ಸಂಭವಿಸಿದೆ. ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಿಗದಿಯಾಗಿದ್ದ ಆರ್‌ಸಿಬಿಯ ವಿಜಯೋತ್ಸವ ಸಮಾರಂಭಕ್ಕೆ ಪಾಲ್ಗೊಳ್ಳಲು ದೊಡ್ಡ ಸಂಖ್ಯೆಯಲ್ಲಿ ಅಭಿಮಾನಿಗಳು ಆಗಮಿಸಿದ ಬೆನ್ನಲ್ಲೇ ನುಕುನುಗ್ಗಲು ಉಂಟಾಗಿದ್ದು, ಕಾಲ್ತುಳಿತಕ್ಕೆ ೧೧ ಮಂದಿ ಮೃತಪಟ್ಟಿರುವ ಬಗ್ಗೆ ಐಎಎನ್‌ಎಸ್ ಸುದ್ದಿಸಂಸ್ಥೆ ವರದಿಯ ಮಾಡಿದೆ. ದುರಂತದಲ್ಲಿ ಹಲವರು ಗಾಯಗೊಂಡಿದ್ದಾರೆ. ಈ ದುರಂತದ ಬೆನ್ನಲ್ಲೇ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಯಬೇಕಿದ್ದ ಸಂಭ್ರಮಾಚರಣೆಯನ್ನು ರದ್ದುಗೊಳಿಸಲಾಗಿದೆ. ಇದಕ್ಕೂ ಮುನ್ನ ವಿಧಾನಸೌಧದ ಮುಂಭಾಗದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಆರ್‌ಸಿಬಿ ತಂಡದ ಆಟಗಾರರನ್ನು ಸನ್ಮಾನಿಸಿದರು. ಈ ವೇಳೆಯೂ ವಿಧಾನಸೌಧದ ಎದುರು ಜನಸಾಗರ ನೆರೆದಿತ್ತು. ಇನ್ನು ವಿಧಾನಸೌಧದಿಂದ ಚಿನ್ನಸ್ವಾಮಿ ಕ್ರೀಡಾಂಗಣದವರೆಗೆ ನಡೆಯಬೇಕಿದ್ದ ವಿಜಯೋತ್ಸವ ಪರೇಡ್ ಅನ್ನು ಭದ್ರತಾ ದೃಷ್ಟಿಯಿಂದ ಸರ್ಕಾರ ರದ್ದುಗೊಳಿಸಿತ್ತು.

<><><>

ಭಾರತ ಹಾಗೂ ಇಟಲಿ ನಡುವಿನ ಆರ್ಥಿಕ ಸಹಕಾರ ಸಂಬಂಧವನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಕೇಂದ್ರ ವಾಣಿಜ್ಯ ಸಚಿವ ಪಿಯೂಷ್ ಗೋಯಲ್ ಎರಡು ದಿನಗಳ ಅಧಿಕೃತ ಪ್ರವಾಸಕ್ಕಾಗಿ ಇಟಲಿಗೆ ತೆರಳಿದ್ದಾರೆ. ಪ್ರವಾಸದ ವೇಳೆ ಅವರು, ರೋಮ್‌ನಲ್ಲಿ ನಡೆಯಲಿರುವ ೨೨ನೇ ಭಾರತ-ಇಟಲಿ ಆರ್ಥಿಕ ಸಹಕಾರಕ್ಕಾಗಿ ಜಂಟಿ ಆಯೋಗದ ಅಧಿವೇಶನದಲ್ಲಿ ಇಟಲಿ ಉಪಪ್ರಧಾನಿ ಮತ್ತು ವಿದೇಶಾಂಗ ಸಚಿವ ಆಂಟೋಣಿಯೋ ತಜಾನಿ ಅವರೊಂದಿಗೆ ಪಾಲ್ಗೊಳ್ಳಲಿದ್ದಾರೆ.

<><><>

ನವದೆಹಲಿಯಲ್ಲಿಂದು ಕೇಂದ್ರ ಸಚಿವ ನಿತಿನ್ ಗಡ್ಕರಿ ಪ್ರಸ್ತುತ ಪ್ರಗತಿಯಲ್ಲಿರುವ ರಾಷ್ಟ್ರೀಯ ಹೆದ್ದಾರಿ ಯೋಜನೆಗಳ ಪ್ರಗತಿ ಪರಿಶೀಲನೆ ನಡೆಸಿದರು. ಈ ಸಭೆಯಲ್ಲಿ ದೆಹಲಿ ಲೆಫ್ಟಿನೆಂಟ್ ಗವರ್ನರ್ ವಿನಯ್ ಕುಮಾರ್ ಸಕ್ಸೇನಾ, ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ, ಸಂಸದರು, ಉನ್ನತ ಅಧಿಕಾರಿಗಳು ಉಪಸ್ಥಿತರಿದ್ದರು. ಪ್ರಮುಖ ಮೂಲಸೌಕರ್ಯ ಯೋಜನೆಗಳನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಲು ಕಾಮಗಾರಿಗೆ ವೇಗ ನೀಡುವ ಅಗತ್ಯವಿದೆ ಎಂಬುದನ್ನು ಸಭೆಯಲ್ಲಿ ಒತ್ತಿ ಹೇಳಲಾಯಿತು.

<><><>

೨೦೨೭ರಲ್ಲಿ ಎರಡು ಹಂತಗಳಲ್ಲಿ ಜನಗಣತಿ ಹಾಗೂ ಜಾತಿ ಗಣತಿ ನಡೆಸಲು ಕೇಂದ್ರ ಸರ್ಕಾರ ತೀರ್ಮಾನಿಸಿದೆ. ಜನಗಣತಿಯನ್ನು ೨೦೨೭ರ ಮಾರ್ಚ್ ೧ ರಂದು ನಡೆಸಲು ಸಧ್ಯಕ್ಕೆ ನಿಗದಿಪಡಿಸಲಾಗಿದೆ. ಈ ಕುರಿತಂತೆ ಹೇಳಿಕೆ ಬಿಡುಗಡೆಗೊಳಿಸಿರುವ ಕೇಂದ್ರ ಗೃಹ ಸಚಿವಾಲಯ ಲಡಾಖ್ ಹಾಗೂ ಹಿಮಾಚಲಪ್ರದೇಶ, ಉತ್ತರಾಖಂಡ್ ಮತ್ತು ಜಮ್ಮು-ಕಾಶ್ಮೀರದ ಹಿಮಾಚಾಧಿತ ಪ್ರದೇಶಗಳಿಗೆ ಉಲ್ಲೇಖದ ದಿನಾಂಕ -೨೦೨೬ರ ಅಕ್ಟೋಬರ್ ೧ ಆಗಿರಲಿದೆ ಎಂದು ತಿಳಿಸಿದೆ. ಜನಗಣತಿ ನಡೆಸುವ ಕುರಿತ ಅಧಿಕೃತ ಅಧಿಸೂಚನೆಯನ್ನು ಇದೇ ೧೬ರಂದು ಪ್ರಕಟಿಸುವ ನಿರೀಕ್ಷೆಯಿದೆ. ಕೊನೆಯ ಬಾರಿ ಜನಗಣತಿಯನ್ನು ೨೦೧೧ ರಲ್ಲಿ ಎರಡು ಹಂತಗಳಲ್ಲಿ ನಡೆಸಲಾಗಿತ್ತು.

<><><>

ವಿಶ್ವ ಪರಿಸರ ದಿನದ ಅಂಗವಾಗಿ ಪ್ರಧಾನಿ ನರೇಂದ್ರ ಮೋದಿ ನಾಳೆ ನವದೆಹಲಿಯ ಭಗವಾನ್ ಮಹಾವೀರ್ ವನಸ್ಥಳಿ ಉದ್ಯಾನವನದಲ್ಲಿ ವಿಶೇಷ ಸಸಿ ನೆಡುವ ಅಭಿಯಾನದ ನೇತೃತ್ವ ವಹಿಸಲಿದ್ದಾರೆ. 'ಏಕ್ ಪೇಡ್ ಮಾ ಕೆ ನಾಮ್' ಉಪಕ್ರಮದಡಿ ಪ್ರಧಾನಿ ಒಂದು ಆಲದ ಮರದ ಸಸಿ ನೆಡಲಿದ್ದಾರೆ. ಇದು ಅರವಳ್ಳಿ ಹಸಿರು ಗೋಡೆ ಯೋಜನೆಯ ಭಾಗವಾಗಿದ್ದು, ೭೦೦ ಕಿಲೋಮೀಟರ್ ವ್ಯಾಪ್ತಿಯಲ್ಲಿ ಮರು ಅರಣ್ಯೀಕರಣದ ಗುರಿ ಹೊಂದಿದೆ. ಅರಣ್ಯೀಕರಣ, ಮರು ಅರಣ್ಯೀಕರಣ ಮತ್ತು ಜಲಸಂಪನ್ಮೂಲಗಳ ಪುನಶ್ಚೇತನದ ಮೂಲಕ ಜೀವ ವೈವಿಧ್ಯತೆಯನ್ನು ಹೆಚ್ಚಿಸುವುದು, ಮಣ್ಣಿನ ಫಲವತ್ತತೆ ಹೆಚ್ಚಿಸುವುದು, ಮತ್ತು ಹವಾಮಾನ ಸ್ಥಿರತೆ ಉತ್ತಮಗೊಳಿಸುವ ಗುರಿಯನ್ನು ಈ ಯೋಜನೆ ಹೊಂದಿದೆ. ಇದರಿಂದ ಸ್ಥಳೀಯರಿಗೆ ಜೀವನೋಪಾಯಕ್ಕೂ ನೆರವಾಗಲಿದೆ. ಇದೇ

ಸಂದರ್ಭದಲ್ಲಿ ಪ್ರಧಾನಿ, ಶುದ್ಧ ನಗರ ಸಾರಿಗೆ ಮತ್ತು ಪರಿಸರ ಸಮತೋಲನ ಉತ್ತೇಜಿಸುವ ದೆಹಲಿ ಸರ್ಕಾರದ ಸುಸ್ಥಿರ ಸಾರಿಗೆ ಉಪಕ್ರಮದಡಿ ೨೦೦ ವಿದ್ಯುತ್ ಚಾಲಿತ ಬಸ್‌ಗಳಿಗೆ ಹಸಿರು ನಿಶಾನೆ ತೋರಲಿದ್ದಾರೆ.

<><><><>

ಅಂತಾರಾಷ್ಟ್ರೀಯ ಆಡಳಿತ ವಿಜ್ಞಾನ ಸಂಸ್ಥೆ ಐಐಎಎಸ್‌ನ ಅಧ್ಯಕ್ಷ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಭಾರತ ಜಯಶಾಲಿಯಾಗಿ ಹೊರ ಹೊಮ್ಮಿದೆ. ಭಾರತ ಹಾಗೂ ಆಸ್ಟ್ರೀಯ ನಡುವೆ ನಿನ್ನೆ ನಡೆದ ಚುನಾವಣೆಯಲ್ಲಿ ಒಟ್ಟು ೧೪೧ ಮತಗಳಲ್ಲಿ ಭಾರತ ೮೭ ಮತಗಳನ್ನು ಪಡೆದು ಗೆಲುವು ಸಾಧಿಸಿದೆ. ಆಡಳಿತ ಸುಧಾರಣೆ ಇಲಾಖೆ ಮೂಲಕ ಭಾರತ ಐಐಎಎಸ್‌ನ ಸದಸ್ಯ ರಾಷ್ಟ್ರವಾಗಿದೆ. ತನ್ನ ಹೇಳಿಕೆಯಲ್ಲಿ ಸಿಬ್ಬಂದಿ, ಸಾರ್ವಜನಿಕ ಕುಂದುಕೊರತೆ ಮತ್ತು ಪಿಂಚಣಿ ಸಚಿವಾಲಯ ಐಐಎಎಸ್ ವಿಶ್ವಸಂಸ್ಥೆಯೊಂದಿಗೆ ನಿಕಟ ಸಂಬಂಧ ಹೊಂದಿದ್ದು, ವಿಶ್ವಸಂಸ್ಥೆಯ ಸಾರ್ವಜನಿಕ ಆಡಳಿತ ಕುರಿತ ತಜ್ಞರ ಸಮಿತಿಯ ಭಾಗವಾಗಿದೆ. ಐಐಎಎಸ್ ೩೧ ಸದಸ್ಯ ರಾಷ್ಟ್ರಗಳು, ೨೦ ರಾಷ್ಟ್ರೀಯ ವಿಭಾಗಗಳು ಮತ್ತು ೧೫ ಶೈಕ್ಷಣಿಕ ಸಂಶೋಧನಾ ಕೇಂದ್ರಗಳ ಜಂಟಿ ಸಂಸ್ಥೆಯಾಗಿದ್ದು, ಸಾರ್ವಜನಿಕ ಆಡಳಿತದ ವೈಜ್ಞಾನಿಕ ಸಂಶೋಧನೆಯಲ್ಲಿ ತೊಡಗಿಸಿಕೊಂಡಿದೆ.

<><><><>

ಪಾಕಿಸ್ತಾನಕ್ಕೆ ಯಾವುದೇ ಆರ್ಥಿಕ ನೆರವು ನೀಡುವ ವಿಚಾರದಲ್ಲಿ ಸಂಪತ್ತಿನ ದುರುಪಯೋಗವಾಗುವ ಸಾಧ್ಯತೆಯಿರುವ ಕುರಿತು ಭಾರತ ಏಷ್ಯ ಅಭಿವೃದ್ಧಿ ಬ್ಯಾಂಕ್ - ಎಡಿಬಿಗೆ ಎಚ್ಚರಿಸಿದೆ. ಪಾಕಿಸ್ತಾನದ ಹೆಚ್ಚುತ್ತಿರುವ ರಕ್ಷಣಾ ವೆಚ್ಚ, ಕುಸಿಯುತ್ತಿರುವ ತೆರಿಗೆ ಜಿಡಿಪಿ ಅನುಪಾತ ಮತ್ತು ಪ್ರಮುಖ ಆರ್ಥಿಕ ಸುಧಾರಣೆಯಲ್ಲಿ ಪ್ರಗತಿ ಕೊರತೆ ಹಿನ್ನೆಲೆಯಲ್ಲಿ ಭಾರತ ಎಡಿಬಿಗೆ ತನ್ನ ಸಂಪನ್ಮೂಲಗಳ ದುರುಪಯೋಗವಾಗದಂತೆ ನೋಡಿಕೊಳ್ಳಲು ಎಚ್ಚರಿಕೆ ನೀಡಿದೆ. ಈ ವೇಳೆ ೨೦೧೮ನೇ ಹಣಕಾಸು ವರ್ಷದಲ್ಲಿ ಶೇಕಡ ೧೩ ರಷ್ಟಿದ್ದ ಪಾಕಿಸ್ತಾನದ ತೆರಿಗೆ ಜಿಡಿಪಿ ಅನುಪಾತ ೨೦೨೩ರಲ್ಲಿ ೬.೨ಕ್ಕೆ ಇಳಿದಿರುವುದನ್ನು ಭಾರತ ಉಲ್ಲೇಖಿಸಿದೆ. ಹಾಗೂ ಪಾಕಿಸ್ತಾನದ ಆಡಳಿತ ವ್ಯವಸ್ಥೆಯು ಪ್ರಾದೇಶಿಕ ಶಾಂತಿ ಮತ್ತು ಭದ್ರತೆಗೆ ಗಂಭೀರ ಬೆದರಿಕೆಯಾಗಿರುವ ಕುರಿತಂತೆಯೂ ಭಾರತ ಸೂಚಿಸಿದೆ.

<><><><>

ಹೈಕೋರ್ಟ್ ನಿವೃತ್ತ ನ್ಯಾಯಾಧೀಶ ಯಶವಂತ್ ವರ್ಮಾ ವಿಷಯದಲ್ಲಿ ಯಾವುದೇ ರಾಜಕೀಯಕ್ಕೆ ಅವಕಾಶವಿಲ್ಲವೆಂದು ಸಂಸದೀಯ ವ್ಯವಹಾರ ಸಚಿವ ಕಿರಣ್ ರಿಜಿಜು ಹೇಳಿದ್ದಾರೆ. ದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ನಿವೃತ್ತ ನ್ಯಾಯಾಧೀಶ ಯಶವಂತ್ ವರ್ಮಾ, ಪ್ರಕರಣದ ಬಗ್ಗೆ ಪ್ರತಿಕ್ರಿಯಿಸಿರುವ ಅವರು, ಯಶವಂತ್ ವರ್ಮಾ ವಿರುದ್ಧದ ಮಹಾಭಿಯೋಗ ಗೊತ್ತುವಳಿ ನ್ಯಾಯಾಂಗದಲ್ಲಿನ ಭ್ರಷ್ಟಾಚಾರಕ್ಕೆ ಸಂಬಂಧಿಸಿದ ವಿಷಯವಾಗಿದ್ದು, ಇದರಲ್ಲಿ ಯಾವುದೇ

ರಾಜಕೀಯಕ್ಕೆ ಅವಕಾಶವಿಲ್ಲ. ಎಲ್ಲ ರಾಜಕೀಯ ಪಕ್ಷಗಳ ನಡುವೆ ಒಮ್ಮತ ಅಭಿಪ್ರಾಯ ನಿರ್ಮಾಣ ಮಾಡಲು ಶ್ರಮಿಸಲಾಗುತ್ತಿದೆ. ಸರ್ಕಾರ ಒಗ್ಗಟ್ಟಿನ ನಿಲುವನ್ನು ಹೊಂದಲು ಬಯಸುತ್ತದೆ. ಅದೇ ರೀತಿ ಈ ವಿಚಾರವಾಗಿ ಒಟ್ಟಾರೆಯಾಗಿ ಸೇರಿ ಚರ್ಚೆ ಮಾಡುವುದಾಗಿ ತಿಳಿಸಿದರು. ಇದು ಗಂಭೀರವಾದ ವಿಷಯವಾಗಿದ್ದು, ನ್ಯಾಯಾಂಗ ವ್ಯವಸ್ಥೆಯಲ್ಲಿ ಅಥವಾ ಎಲ್ಲೇ ಭ್ರಷ್ಟಾಚಾರ ನಡೆದರೂ ಅದನ್ನು ದೇಶದ ಹಿತಾಸಕ್ತಿ ಕಾಪಾಡುವ ಉದ್ದೇಶದಿಂದ ಉತ್ತಮ ನಿರ್ಧಾರ ತೆಗೆದುಕೊಳ್ಳುವುದಾಗಿ ಭರವಸೆ ನೀಡಿದರು.

<><><><>

ಭಾರತೀಯ ರೈಲ್ವೆ ತನ್ನ ಟಿಕೇಟ್ ಬುಕ್ಕಿಂಗ್ ವ್ಯವಸ್ಥೆಯಲ್ಲಿ ಬಾಟ್‌ಗಳ ಮೂಲಕ ನಡೆಯುವ ಅಕ್ರಮ ಅನಧಿಕೃತ ಬುಕ್ಕಿಂಗ್‌ಗಳನ್ನು ತಡೆಯುವ ನಿಟ್ಟಿನಲ್ಲಿ ಬೃಹತ್‌ಕ್ರಮ ಕೈಗೊಂಡಿದ್ದು, ಕೃತಕ ಬುದ್ಧಿಮತ್ತೆ ಮತ್ತು ಆಧಾರಿತ ವ್ಯವಸ್ಥೆಯ ಮೂಲಕ ೨.೫ ಕೋಟಿ ಅನುಮಾನಸ್ಪದ ಬಳಕೆದಾರರ ಐಡಿಗಳನ್ನು ನಿಷ್ಕ್ರಿಯಗೊಳಿಸಲಾಗಿದೆ ಎಂದು ಭಾರತೀಯ ರೈಲ್ವೆ ತಿಳಿಸಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>